# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

KANNADA POST

ಕನ್ನಡ ದಿನ ಪತ್ರಿಕೆ Kannada Daily

ಹಾಸನ E-mail : kannadapostnews@gmail.com / ಕನ್ನಡ post Price: ₹1

Vol.No.01 | Issue. 186 | Pages. 2 | Date: 01-06-2025, SUNDAY RNI NO: KARKAN/2024/89601

ಸಂಪುಟ : 01 - ಸಂಚಿಕೆ : 186 - ಪುಟಗಳು : 2 - 01 ಜೂನ್ 2025 ಭಾನುವಾರ Ph: 8762954248 ದರ : ₹1


## ಚಿನ್ನಕ್ಕಾಗಿ ಉದ್ಯೋಗದಾತನನ್ನೇ ಕೊಂದ ದುಷ್ಕರ್ಮಿಗಳು

### ಬಿಹಾರ ಮೂಲದ ಕಾರ್ಮಿಕರ ಬಂಧನ | ಬೆಚ್ಚಿ ಬೀಳಿಸಿದ ಪ್ರಕರಣ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕೂಲಿ ಕೆಲಸಕ್ಕೆಂದು ಬಂದಿದ್ದ ಕಾರ್ಮಿಕರೇ ಉದ್ಯೋಗದಾತನನ್ನು ಭೀಕರವಾಗಿ ಕೊಂದು ಮೈಮೇಲಿದ್ದ 6.45 ಲಕ್ಷ ರೂ. ಮೌಲ್ಯದ ಚಿನ್ನಾಭರಣ ದೋಚಿರುವ ಘಟನೆ ಅರಸೀಕೆರೆಯಲ್ಲಿ ಶುಕ್ರವಾರ ರಾತ್ರಿ ನಡೆದಿದೆ.

ನಗರದ ವಿಜಯಕುಮಾರ್ (46) ಮೃತರು. ಘಟನೆ ಸಂಬಂಧ ಬಿಹಾರ ಮೂಲದ ವಿಕ್ರಂ (25) ಹಾಗು ಅಪ್ರಾಪ್ತನನ್ನು (ಈತನ ಮುಖ ಚಹರೆ ಪ್ರಕಾರ ಅಂದಾಜು 28 ವರ್ಷದವನಾಗಿದ್ದು, ಆಧಾರ್ ಕಾರ್ಡ್ ದಾಖಲಾತಿ ಅನುಸಾರ ಅಪ್ರಾಪ್ತ ಎನ್ನಲಾಗಿದೆ) ಬಂಧಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತಾ ಸುದ್ದಿಗೋಷ್ಠಿಯಲ್ಲಿ ಶನಿವಾರ ತಿಳಿಸಿದರು.

ಘಟನೆ ಹಿನ್ನಲೆ: ಅರಸೀಕೆರೆಯ ವಿಜಯಕುಮಾರ್ ಕಟ್ಟಡ ಹಾಗೂ ಲೇಬರ್ ಗುತ್ತಿಗೆದಾರರಾಗಿದ್ದು ಕೆಎಸ್‌ಆರ್‌ಟಿಸಿ ಮುಂಭಾಗ ಶ್ರೀನಿವಾಸ್‌ರೆಡ್ಡಿ ಎಂಬುವರಿಗೆ ಸೇರಿದ ಹೊಸ ಹೋಟೆಲ್ ಕಟ್ಟಡದ ಗಾರೆ ಕೆಲಸಕ್ಕೆ ಬಿಹಾರದಿಂದ ವಿಕ್ರಂ ಹಾಗೂ ಇನ್ನೊಬ್ಬನನ್ನು ಕರೆಸಿಕೊಂಡಿದ್ದರು.



ವಿಕ್ರಂ ಒಂದು ತಿಂಗಳಿಂದ ಕೆಲಸ ಮಾಡಿಕೊಂಡಿದ್ದರೆ ಮತ್ತೊಬ್ಬ ವಾರದ ಹಿಂದಷ್ಟೇ ಬಂದಿದ್ದ. ವಿಜಯಕುಮಾರ್ ಯಾವಾಗಲೂ ಕೊರಳಿನಲ್ಲಿ ಲಕ್ಷಾಂತರ ರೂ. ಬೆಲೆ ಬಾಳುವ ಚಿನ್ನದ ಚೈನ್, ನಾಲ್ಕೈದು ಉಂಗುರ ಹಾಕಿಕೊಳ್ಳುತ್ತಿದ್ದರು. ವಿಜಯಕುಮಾರ್ ಮೈಮೇಲಿದ್ದ ಚಿನ್ನದ ಒಡವೆಗಳ ಮೇಲೆ ಇಬ್ಬರೂ ಕಣ್ಣಿಟ್ಟಿದ್ದರು. ಅದನ್ನು ಪಡೆಯುವುದಕ್ಕಾಗಿ ಅನಾರೋಗ್ಯದ ನೆಪ ಹೆಣೆದಿದ್ದರು.

ಶುಕ್ರವಾರ ತಡರಾತ್ರಿ ವಿಕ್ರಂ ಹಾಗು ಬಾಲಕ ವಿಜಯಕುಮಾರ್‌ಗೆ ಕರೆ ಮಾಡಿ ನಮಗೆ ಆರೋಗ್ಯ ಸರಿಯಿಲ್ಲ. ಆಸ್ಪತ್ರೆಗೆ ಕರೆದುಕೊಂಡು ಹೋಗಿ, ನಾವು ಹೊರಗಡೆ ಹೋದರೆ ಅನುಮಾನ ಪಡುತ್ತಾರೆ ಎಂದಿದ್ದರು. ಆಗ ವಿಜಯಕುಮಾರ್ ಅವರು ಕಟ್ಟಡ ಮಾಲೀಕ ಶ್ರೀನಿವಾಸ್ ರೆಡ್ಡಿಗೆ ಕರೆ ಮಾಡಿ ನಮ್ಮ ಹುಡುಗರ ಬಳಿಗೆ ಹೋಗುತ್ತಿದ್ದೇನೆ ಎಂದಿದ್ದರು.

ಆಗ ಶ್ರೀನಿವಾಸ್ ರೆಡ್ಡಿ, ನೀನು ಹೋಗುವುದು ಬೇಡ ನಾಳೆ ನೋಡೋಣ ಎಂದಿದ್ದಾರೆ. ಆದರೆ ವಿಜಯಕುಮಾರ್ ಅವರಿಗೆ ಏನಾದರೂ ಹೆಚ್ಚು ಕಡಿಮೆಯಾದರೆ ನಾನು ಹೊಣೆಗಾರನಾಗಬೇಕಾಗುತ್ತದೆ. ನೋಡಿಕೊಂಡು ಬರುತ್ತೇನೆ ಎಂದು ತಮ್ಮ ಸ್ಕೂಟಿಯಲ್ಲಿ ಕಟ್ಟಡದ ಬಳಿಗೆ ತೆರಳಿದ್ದಾರೆ. ವಿಜಯಕುಮಾರ್ ಬರುವುದನ್ನೇ ಆರೋಪಿಗಳು ಕಾಯುತ್ತ ನಿಂತಿದ್ದರು.

#### ಬೆರಳು ಕತ್ತರಿಸಿದ ದುಷ್ಕರ್ಮಿಗಳು

ವಿಜಯ್‌ಕುಮಾರ್ ಕಟ್ಟಡದ ಮುಂದೆ ಸ್ಕೂಟಿ ನಿಲ್ಲಿಸಿ ಒಳಗೆ ಹೋಗುತ್ತಿದ್ದಂತೆ ಕಬ್ಬಿಣದ ರಾಡ್‌ನಿಂದ ಬಲವಾಗಿ ತಲೆಗೆ ಹೊಡೆದಿದ್ದು ಅವರು ನೆಲಕ್ಕೆ ಬಿದ್ದಿದ್ದಾರೆ. ನಂತರ ಸಣ್ಣ ಗ್ಯಾಸ್ ಸಿಲಿಂಡರ್‌ನಿಂದ ತಲೆ, ಮುಖವನ್ನು ಜಜ್ಜಿ ಭೀಕರವಾಗಿ ಕೊಲೆ ಮಾಡಿದ್ದಾರೆ. ವಿಜಯಕುಮಾರ್ ಮೃತಪಟ್ಟ ನಂತರ ಅವರ ಕೊರಳಿನಲ್ಲಿದ್ದ ಚಿನ್ನದ ಚೈನ್, ಕೈಯಲ್ಲಿದ್ದ ಮೂರು ಉಂಗುರಗಳನ್ನು ಕಸಿದುಕೊಂಡಿದ್ದಾರೆ. ಒಂದು ಉಂಗುರ ಬೆರಳಿನಿಂದ ಬಾರದಿದ್ದಾಗ ಬೆರಳನ್ನು ತುಂಡರಿಸಿ ಬೆರಳಿನ ಸಮೇತ ಉಂಗುರವನ್ನು ಎತ್ತಿಕೊಂಡು ವಿಜಯಕುಮಾರ್ ಅವರ ಸ್ಕೂಟಿಯಲ್ಲಿಯೇ ಸ್ಥಳದಿಂದ ಹೊರಟಿದ್ದಾರೆ. ಬಳಿಕ ಪಟ್ಟಣದ ಹೋಟೆಲ್‌ವೊಂದರ ಮುಂದೆ ಸ್ಕೂಟಿ ನಿಲ್ಲಿಸಿ ಪರಾರಿಯಾಗಿದ್ದಾರೆ.

#### ಸಿಸಿಟಿವಿಯಲ್ಲಿ ದೃಶ್ಯ ಸೆರೆ

ಆರೋಪಿಗಳು ವಿಜಯಕುಮಾರ್ ಅವರನ್ನು ಕೊಲೆ ಮಾಡಿ ಸ್ಕೂಟಿಯಲ್ಲಿ ಎಸ್ಕೇಪ್ ಆಗುವ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ. ಸ್ಥಳಕ್ಕೆ ಅರಸೀಕೆರೆ ನಗರಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು ಸಿಸಿಟಿವಿ ದೃಶ್ಯ ಆಧರಿಸಿ ಆರೋಪಿಗಳನ್ನು ಬಂಧಿಸಲಾಗಿದೆ. ಚಿನ್ನದ ಒಡವೆಗಳನ್ನು ಮೈಮೇಲೆ ಹಾಕಿಕೊಂಡಿದ್ದಕ್ಕೆ ತಾನೇ ಕರೆತಂದಿದ್ದ ಗಾರೆ ಕೆಲಸಗಾರರಿಂದ ಗುತ್ತಿಗೆದಾರ ಬರ್ಬರವಾಗಿ ಹತ್ಯೆಯಾಗಿರುವುದು ನಗರದಲ್ಲಿ ಆತಂಕ ಹೆಚ್ಚಿಸಿದೆ.

> ಶ್ರೀನಿವಾಸ್ ರೆಡ್ಡಿ ಎಂಬುವರ ಕಟ್ಟಡ ನಿರ್ಮಾಣದಲ್ಲಿ ಬಿಹಾರ ಮೂಲದ ಕಾರ್ಮಿಕರು ಭಾಗಿಯಾಗಿದ್ದರು. ಹಣಕಾಸು ಹಾಗೂ ಚಿನ್ನಾಭರಣ ವಿಚಾರವಾಗಿ ಗಲಾಟೆ ನಡೆದು ಕಂಟ್ರ್ಯಾಕ್ಟರ್ ವಿಜಯಕುಮಾರ್ ಅವರನ್ನು ಹತ್ಯೆಗೈದಿದ್ದಾರೆ. ಬೆಂಗಳೂರು ರೈಲ್ವೆ ನಿಲ್ದಾಣದಲ್ಲಿ ಅವರನ್ನು ವಶಕ್ಕೆ ಪಡೆಯಲಾಗಿದೆ.
>
> **- ಮೊಹಮ್ಮದ್ ಸುಜೀತಾ, ಎಸ್ಪಿ**

## ಕ್ಷುಲ್ಲಕ ಕಾರಣಕ್ಕೆ ಮಾರಣಾಂತಿಕ ಹಲ್ಲೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕ್ಷುಲ್ಲಕ ಕಾರಣಕ್ಕೆ ವ್ಯಕ್ತಿ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿರುವ ಘಟನೆ ನಗರದ ಬಿಎಂ ರಸ್ತೆಯ ಆಂಜನೇಯಸ್ವಾಮಿ ದೇವಾಲಯ ಪಕ್ಕದ ಬಸ್ ತಂಗುದಾಣದಲ್ಲಿ ಇತ್ತೀಚೆಗೆ ನಡೆದಿದೆ.

ಮೇಸ್ತ್ರಿ ಕೆಲಸ ಮಾಡಿಕೊಂಡಿರುವ ಹುಬ್ಬಳ್ಳಿಯ ರಫೀಕ್ ಎಂಬುವರ ಮೇಲೆ ಅಪರಿಚಿತ ಚಾಕುವಿನಿಂದ ಹಲ್ಲೆ ನಡೆಸಿದ್ದಾನೆ. ರಫೀಕ್ ಜೊತೆಗೆ ಇದ್ದ ಬೆಳಗಾವಿಯ ಹನುಮಂತ ಎಂಬಾತ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸುತ್ತಿದ್ದಾರೆ.

ಘಟನೆ ಹಿನ್ನಲೆ: ಬೆಳಗಾವಿ ಜಿಲ್ಲೆ ಕಣಬರಗಿ ನಿವಾಸಿ ಹನುಮಂತ ಉದ್ಯೋಗ ಅರಸಿ ಹಾಸನಕ್ಕೆ ಬಂದಿದ್ದು ಗಾರೆ ಕೆಲಸ ಮಾಡಿಕೊಂಡಿದ್ದಾನೆ. ಅದೇ ರೀತಿ ರಫೀಕ್ ಕೂಡ ಮೇಸ್ತ್ರಿ ಕೆಲಸಗಾರನಾಗಿರುವುದರಿಂದ ಇಬ್ಬರೂ ಪರಸ್ಪರ ಪರಿಚಯವಾಗಿ ಬಿಎಂ ರಸ್ತೆಯ ಆಂಜನೇಯ ಸ್ವಾಮಿ ದೇವಾಲಯ ಪಕ್ಕದಲ್ಲಿರುವ ಬಸ್ ತಂಗುದಾಣದಲ್ಲಿ ಮಲಗಿ ರಾತ್ರಿ ಕಳೆಯುತ್ತಿದ್ದರು. ಮೇ 28ರ ರಾತ್ರಿ ಇಬ್ಬರೂ ಊಟ ಮಾಡಿ ಮಲಗಲೆಂದು ತೆರಳಿದ್ದು ಇವರು ಹೋಗುವ ಮೊದಲೇ ಅಪರಿಚಿತ ಮೂವರು ಮಲಗಿದ್ದರು.

ರಾತ್ರಿ 3ರ ವೇಳೆಯಲ್ಲಿ ಅಪರಿಚಿತ ವ್ಯಕ್ತಿ ರಫೀಕ್ ಜೊತೆಗೆ ಜಗಳ ತೆಗೆದು ಹಲ್ಲೆ ಮಾಡುತ್ತಿದ್ದ. ಪಕ್ಕದಲ್ಲೇ ಮಲಗಿದ್ದ ಹನುಮಂತ ಅವರು ಜಗಳ ಬಿಡಿಸಲು ಯತ್ನಿಸಿದರೂ ಪರಿಸ್ಥಿತಿ ನಿಯಂತ್ರಣಕ್ಕೆ ಬಾರದ ಹಿನ್ನಲೆಯಲ್ಲಿ ಅಣತಿ ದೂರದಲ್ಲಿದ್ದ ಆಟೋ ಚಾಲಕರನ್ನು ಕರೆದುಕೊಂಡು ಬರಲು ತೆರಳಿದ್ದರು. ಆದರೆ ವಾಪಾಸ್ ಬರುವಷ್ಟರಲ್ಲಿ ಅಪರಿಚಿತ ವ್ಯಕ್ತಿಯು ಚಾಕುವಿನಿಂದ ರಫೀಕ್ ಅವರ ಹೊಟ್ಟೆಗೆ ಇರಿದು ನಾಪತ್ತೆಯಾಗಿದ್ದ.

ಬಡಾವಣೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸರ್ಕಾರದ ಭರವಸೆ: ಕುಣಿದು ಕುಪ್ಪಳಿಸಿದ ಪೌರ ಕಾರ್ಮಿಕರು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಪೌರ ಕಾರ್ಮಿಕರ ಬೇಡಿಕೆ ಈಡೇರಿಸಲು ಮುಖ್ಯಮಂತ್ರಿ ಭರವಸೆ ನೀಡಿದ ಹಿನ್ನೆಲೆಯಲ್ಲಿ ಪೌರ ಕಾರ್ಮಿಕರ ಸಂಘ ಮುಷ್ಕರ ವಾಪಾಸ್ ಪಡೆದಿದ್ದು ಶನಿವಾರ ಮಹಾನಗರ ಪಾಲಿಕೆ ಕಚೇರಿ ಎದುರು ಪೌರ ಕಾರ್ಮಿಕರು ಸಿಹಿ ಹಂಚಿ ಕುಣಿದು ಕುಪ್ಪಳಿಸಿದರು.

ಮಹಾನಗರ ಪಾಲಿಕೆ ಅಧ್ಯಕ್ಷ ಎಂ. ಚಂದ್ರೇಗೌಡ ಮಾತನಾಡಿ, ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಪೌರ ಕಾರ್ಮಿಕರು ಕೆಲಸ ಬಹಿಷ್ಕರಿಸಿ ಪ್ರತಿಭಟನೆ ನಡೆಸುತ್ತಿದ್ದರು. ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳ ಪೌರ ನೌಕರರನ್ನು ರಾಜ್ಯ ಸರ್ಕಾರಿ ನೌಕರರೆಂದು ಪರಿಗಣಿಸಬೇಕು. ನಗದು ರಹಿತ ಆರೋಗ್ಯ ಚಿಕಿತ್ಸಾ ಸೌಲಭ್ಯ ಯೋಜನೆಯಾದ ಜ್ಯೋತಿ ಸಂಜೀವಿನಿಯನ್ನು ಪೌರ ನೌಕರರಿಗೂ ವಿಸ್ತರಿಸಬೇಕು. ಹೊರಗುತ್ತಿಗೆ ನೌಕರರನ್ನು ನೇರ ಪಾವತಿಗೆ ಒಳಪಡಿಸಬೇಕು ಸೇರಿ ವಿವಿಧ ಬೇಡಿಕೆಗಳನ್ನು ಪೌರ ಕಾರ್ಮಿಕರು ಸರ್ಕಾರದ ಮುಂದಿಟ್ಟಿದ್ದಾರೆ ಎಂದರು.



ನ್ಯಾಯಯುತ ಬೇಡಿಕೆಗೆ ಸರಕಾರ ಸ್ಪಂದಿಸಬೇಕೆಂದು ರಾಜ್ಯದ ಎಲ್ಲಾ ಪೌರ ಕಾರ್ಮಿಕರು ಒಗ್ಗಟ್ಟಾಗಿ ಹೋರಾಟ ಮಾಡಿದ ಪರಿಣಾಮ ಜಯ ಸಿಕ್ಕಿದೆ. ಎಲ್ಲಾ ಸಮಸ್ಯೆಯನ್ನು ಮುಖ್ಯಮಂತ್ರಿ ಬಗೆಹರಿಸುವುದಾಗಿ ಭರವಸೆ ನೀಡಿದ್ದಾರೆ.

ಮುಷ್ಕರ ನಿರತ ಪೌರಕಾರ್ಮಿಕರು ತಮ್ಮ ಮುಷ್ಕರ ಹಿಂಪಡೆದಿದ್ದು, ಶನಿವಾರದಿಂದಲೇ ಕರ್ತವ್ಯಕ್ಕೆ ಹಾಜರಾಗಿದ್ದಾರೆ ಎಂದು ತಿಳಿಸಿದರು.

ರಾಜ್ಯ ಪೌರ ನೌಕರರ ಸಂಘದ ಶಾಖಾ ಅಧ್ಯಕ್ಷ ಎನ್.ಆರ್. ವೆಂಕಟೇಶ್ ಮಾತನಾಡಿ, ಮೇ. 27 ರಿಂದ ಪೌರ ಕಾರ್ಮಿಕರು ಕೆಲಸ ಸ್ಥಗಿತಗೊಳಿಸಿ ಮುಷ್ಕರ ಪ್ರಾರಂಭಿಸಿದ್ದೆವು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ ರಾತ್ರಿ ಸಭೆ ನಡೆಸಿ ಎಲ್ಲಾ ಬೇಡಿಕೆಗಳನ್ನು ಹಂತ ಹಂತವಾಗಿ ಈಡೇರಿಸುವುದಾಗಿ ಭರವಸೆ ನೀಡಿದ್ದಾರೆ. ಹೀಗಾಗಿ ಮುಷ್ಕರ ವಾಪಾಸ್ ಪಡೆದಿದ್ದೇವೆ ಎಂದು ಹೇಳಿದರು.

ಮಹಾನಗರ ಪಾಲಿಕೆ ಆಯುಕ್ತ ರಮೇಶ್, ಸದಸ್ಯ ಮಂಜುನಾಥ್, ಪೌರ ನೌಕರರ ಸಂಘದ ಜಿಲ್ಲಾಧ್ಯಕ್ಷ ಎಂ. ಯೋಗೇಶ್, ಉಪಾಧ್ಯಕ್ಷ ರಮೇಶ್, ಪ್ರಧಾನ ಕಾರ್ಯದರ್ಶಿ ರಂಜನ್, ಖಜಾಂಚಿ ಹೆಚ್.ಜಿ. ರಾಮು, ಎಸ್.ಡಿ. ಚಂದ್ರು ಇತರರು ಇದ್ದರು.

## ಹೊರಗಿನವರಿಗೆ ಕನ್ನಡ ಕಲಿಸುವ ಕೆಲಸವಾಗಲಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೆತ್ತೂರು: ಹೊರಗಿನಿಂದ ಬಂದು ರಾಜ್ಯದಲ್ಲಿ ನೆಲೆಸಿದವರಿಗೆ ಕನ್ನಡವನ್ನು ಕಲಿಸಲು ಪ್ರತಿಯೊಬ್ಬರು ಮುಂದಾಗಬೇಕೆಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಡಾ. ಎಚ್.ಎಲ್. ಮಲ್ಲೇಶ್‌ಗೌಡ ಹೇಳಿದರು.

ಹೋಬಳಿ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಶನಿವಾರ ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ ಕನ್ನಡ ವಿಷಯದಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಹೆತ್ತೂರು ಹೋಬಳಿ ಬೆಳಗಾರರ ಸಂಘದ ಸಭಾಂಗಣದಲ್ಲಿ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಕನ್ನಡ ಹುಟ್ಟಿದ್ದು ತಮಿಳು ಭಾಷೆಯಿಂದ ಎಂದಿರುವ ನಟ ಕಮಲ್ ಹಾಸನ್ ಭಾಷಾ ತಜ್ಞನಲ್ಲ. ಜಾಗತಿಕ ಮಟ್ಟದಲ್ಲಿ ಕನ್ನಡಕ್ಕೆ ತನ್ನದೇಯಾದ ಬೆಲೆಯಿದೆ. ನಮ್ಮ ಮೂಲ ಕಸಬು, ವೃತ್ತಿ ಉಳಿಸಿಕೊಳ್ಳುವುದರೊಂದಿಗೆ ಭಾಷೆಯನ್ನು ಇನ್ನಷ್ಟು ಗಟ್ಟಿಯಾಗಿ ಉಳಿಸಿಕೊಳ್ಳಬಹುದು ಎಂದರು.



ಪತ್ರಕರ್ತ ಪ್ರಸನ್ನ ಕುಮಾರ್ ಮಾತನಾಡಿ, ಪ್ರತಿಭಾ ಪುರಸ್ಕಾರ ಒಂದು ಸೀಮಿತ ವಿಚಾರಕ್ಕೆ ಮಾತ್ರ ಸೀಮಿತವಾಗಬಾರದು. ಪ್ರಸ್ತುತ ಶಿಕ್ಷಣ ಯಾವ ದಿಕ್ಕಿನಡೆ ಸಾಗುತ್ತಿದೆ ಎಂಬುದನ್ನು ಅವಲೋಕನ ಮಾಡಬೇಕು. ಪೋಷಕರು ಮಕ್ಕಳ ಶಿಕ್ಷಣಕ್ಕಾಗಿ ಊರು ಬಿಟ್ಟು ನಗರ ಸೇರುವ ಪರಿಸ್ಥಿತಿ ಎದುರಾಗಿದೆ. ವೈಜ್ಞಾನಿಕ ಯುಗಕ್ಕೆ ಹೊಂದಿಕೊಳ್ಳುವ ಅವಸರದಲ್ಲಿ ನಾವು ನಮ್ಮ ತನವನ್ನು ಹಾಗೂ ನಮ್ಮ ಸಂಸ್ಕೃತಿಯನ್ನು ಮರೆಯಬಾರದು. ನಮ್ಮ ಮಲೆನಾಡಿನ ಬದುಕು ಕಾಫಿ, ಏಲಕ್ಕಿ, ಮೆಣಸು, ಕಾಡು ಜೇನುಗೂಡಲ್ಲಿ ನಾವು ಕನ್ನಡ ಹುಡುಕಬೇಕು ಎಂದರು.

ಜಿಲ್ಲಾ ಮಲಬಾರ್ ಗೋಲ್ಡ್ ಅಂಡ್ ಡೈಮಂಡ್ ಟ್ರಸ್ಟ್ ವ್ಯವಸ್ಥಾಪಕ ದಯಾನಂದ ಮಾತನಾಡಿ, ಮಲಬಾರ್ ಗೋಲ್ಡ್ ಅಂಡ್ ಡೈಮಂಡ್ ಟ್ರಸ್ಟ್ ಮೂಲಕ ಎಸ್‌ಎಸ್‌ಎಲ್‌ಸಿ ನಂತರದ ವಿದ್ಯಾರ್ಥಿನಿಯರಿಗೆ ಮುಂದಿನ ವಿದ್ಯಾಭ್ಯಾಸಕ್ಕಾಗಿ ವಿದ್ಯಾರ್ಥಿ ವೇತನ ನೀಡಲಾಗುತ್ತಿದೆ. ಎಸ್‌ಎಸ್‌ಎಲ್‌ಸಿ ನಂತರ ಸರ್ಕಾರಿ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡುವ ವಿದ್ಯಾರ್ಥಿನಿಯರು ಈ ಸದುಪಯೋಗವನ್ನು ಪಡೆದುಕೊಳ್ಳಬಹುದು ಎಂದು ಹೇಳಿದರು. ಚಿಂತಕ ಯಡೆಹಳ್ಳಿ ಆರ್. ಮಂಜುನಾಥ್ ಮಾತನಾಡಿ, ಮಕ್ಕಳಲ್ಲಿ ನಮ್ಮ ಸಂಸ್ಕೃತಿಯನ್ನು ಬಿತ್ತುವ ಮೂಲಕ ಹಾಗೂ ದಿನನಿತ್ಯ ಕನ್ನಡವನ್ನು ಬಳಸುವ ಮೂಲಕ ಕನ್ನಡವನ್ನು ಉಳಿಸಿ ಬೆಳೆಸಬಹುದು. ಈ ನಿಟ್ಟಿನಲ್ಲಿ ಪ್ರತಿಯೊಬ್ಬ ಮಕ್ಕಳು ನಮ್ಮ ಸಂಸ್ಕೃತಿಯನ್ನು ಅನುಕರಿಸಬೇಕು ಎಂದರು.

ಹೆತ್ತೂರು ಹೋಬಳಿ ಘಟಕದ ಅಧ್ಯಕ್ಷ ರವಿಕುಮಾರ್ ಮಾತನಾಡಿದರು. 2024-25ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಕನ್ನಡ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ 26 ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ನಿವೃತ್ತ ಶಿಕ್ಷಕಿ ಮೀನಾಕ್ಷಿ, ಗ್ರಾಮ ಪಂಚಾಯಿತಿ ಅಧ್ಯಕ್ಷ ನಾಗರಾಜ್, ಹೆತ್ತೂರು ಕೃಷಿ ಪತ್ತಿನ ಸಹಕಾರ ಅಧ್ಯಕ್ಷ ನಾಗಭೂಷಣ್, ಸಮಾಜ ಸೇವಕ ಸುಜಿತ್ ಉಪಸ್ಥಿತರಿದ್ದರು.

## ನಿರಂತರ ಮಳೆಗೆ 58 ಮನೆಗಳಿಗೆ ಹಾನಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಕಳೆದ ಒಂದು ವಾರದಿಂದ ಸುರಿದ ನಿರಂತರ ಮಳೆಗೆ ಸಕಲೇಶಪುರ ಉಪವಿಭಾಗ ವ್ಯಾಪ್ತಿಯಲ್ಲಿ 58 ಮನೆಗಳಿಗೆ ಹಾನಿಯಾಗಿದೆ ಎಂದು ಉಪವಿಭಾಗಾಧಿಕಾರಿ ಡಾ. ಶ್ರುತಿ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವ್ಯಾಪ್ತಿಯ ಅರಕಲಗೂಡು ತಾಲ್ಲೂಕಿನಲ್ಲಿ 4 ಮನೆಗಳು ಸಂಪೂರ್ಣ ಕುಸಿದು ಬಿದ್ದಿವೆ. ಸಕಲೇಶಪುರ ತಾಲ್ಲೂಕಿನಲ್ಲಿ 19, ಆಲೂರು 10, ಬೇಲೂರಿನಲ್ಲಿ 11 ಮನೆಗಳು ಕುಸಿದಿವೆ ಎಂದು ತಿಳಿಸಿದರು.

ಎನ್‌ಡಿಆರ್‌ಎಫ್, ಎಸ್‌ಡಿಆರ್‌ಎಫ್ ಮಾರ್ಗಸೂಚಿ ಪ್ರಕಾರ ಮನೆಗಳು ಸಂಪೂರ್ಣ ಕುಸಿದಿದ್ದರೆ 1.20 ಲಕ್ಷರೂ., ಭಾಗಶಃ ಹಾನಿಯಾಗಿದ್ದರೆ 6,500 ರೂ. ಪರಿಹಾರ ಹಣ ಪಾವತಿ ಮಾಡುತ್ತಿದ್ದೇವೆ. ನಾಲ್ಕು ತಾಲ್ಲೂಕುಗಳಲ್ಲಿ 7 ಜಾನುವಾರುಗಳು ಸಾವನ್ನಪ್ಪಿವೆ ಎಂದು ಹೇಳಿದರು.



ಮನೆಯ ತಡೆಗೋಡೆಗಳು ಕುಸಿದಿದ್ದರೆ ಪುರಸಭೆ ಜೊತೆ ಸೇರಿ ಪರಿಹಾರ ಒದಗಿಸಲಾಗುತ್ತಿದೆ. ಇದುವರೆಗೂ ಯಾವುದೇ ಪ್ರಾಣ ಹಾನಿ ಸಂಭವಿಸಿಲ್ಲ. ಸಕಲೇಶಪುರ ಪಟ್ಟಣದಲ್ಲಿ ಹೋಟೆಲ್ ಗೋಡೆ ಕುಸಿದು ನಾಲ್ಕು ಮಂದಿಗೆ ಗಾಯಗಳಾಗಿವೆ. ವೈದ್ಯರ ವರದಿ ತರಿಸಿಕೊಂಡು ಪರಿಹಾರ ನೀಡಲಾಗುವುದು. ಸಕಲೇಶಪುರ ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ 75 ರಲ್ಲಿ ಭೂಕುಸಿತವಾದರೆ ಕೂಡಲೇ ಮಣ್ಣು ತೆರವುಗೊಳಿಸಿ ವಾಹನಗಳ ಓಡಾಟಕ್ಕೆ ಅಡ್ಡಿಯಾಗದಂತೆ ಕ್ರಮ ಕೈಗೊಂಡಿದ್ದೇವೆ. ರಸ್ತೆಗಳಿಗೆ ಮರಗಳು ಬಿದ್ದ ಕೂಡಲೇ ತೆರವುಗೊಳಿಸಲಾಗುತ್ತಿದೆ. ವಿದ್ಯುತ್ ಕಂಬಗಳು ಬಿದ್ದು ವಿದ್ಯುತ್ ಸಂಪರ್ಕ ಕಡಿತಗೊಂಡಿದ್ದರೆ ತುರ್ತಾಗಿ ಸ್ಪಂದಿಸಲು ವಿದ್ಯುತ್ ಇಲಾಖೆಗೆ ಸೂಚನೆ ನೀಡಲಾಗಿದೆ. ವಿದ್ಯುತ್ ಇಲಾಖೆ 24★7 ಕಂಟ್ರೋಲ್ ರೂಂ ತೆರೆದಿದ್ದಾರೆ. ಸಕಲೇಶಪುರ ತಾಲ್ಲೂಕಿನ ಬಿಸಿಲೆ, ಹೆತ್ತೂರು ಭಾಗಗಳಲ್ಲಿ ವಿದ್ಯುತ್ ಸಂಪರ್ಕ ಕಡಿತಗೊಂಡಿದ್ದು, ಗಾಗಲೇ ದುರಸ್ತಿ ಕಾರ್ಯ ನಡೆಯುತ್ತಿದೆ ಎಂದು ಹೇಳಿದರು.

ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ಲೋಕೋಪಯೋಗಿ ಇಲಾಖೆ, ಗ್ರಾಮ ಪಂಚಾಯಿತಿ ಮಟ್ಟದ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ದುರಸ್ತಿ ಕಾರ್ಯ ನಡೆಸಲಾಗುತ್ತಿದೆ. ಮುನ್ನೆಚ್ಚರಿಕೆ ಕ್ರಮವಾಗಿ ಕಾಳಜಿ ಕೇಂದ್ರ ತೆರೆಯಲಾಗಿದೆ ಎಂದು ಮಾಹಿತಿ ನೀಡಿದರು.

## ಪ್ರತ್ಯೇಕ ಅಪಘಾತ: ಇಬ್ಬರ ಸಾವು

ಅರಸೀಕೆರೆ: ತಾಲ್ಲೂಕಿನ ಬಾಣಾವರ ಹಾಗೂ ನಗರ ಠಾಣೆ ವ್ಯಾಪ್ತಿಯಲ್ಲಿ ಸಂಭವಿಸಿದ ಪ್ರತ್ಯೇಕ ಅಪಘಾತದಲ್ಲಿ ಇಬ್ಬರು ಮೃತಪಟ್ಟು ಮಹಿಳೆ ಗಾಯಗೊಂಡಿದ್ದಾರೆ.

ತಾಲ್ಲೂಕಿನ ಚಿಕ್ಕಾರಹಳ್ಳಿ ಗೇಟ್ ಬಳಿ ಕೆಎಸ್‌ಆರ್‌ಟಿಸಿ ಬಸ್ ಡಿಕ್ಕಿಯಾಗಿ ಬೈಕ್ ಸವಾರ ಮೃತಪಟ್ಟು ಮಹಿಳೆ ಗಾಯಗೊಂಡಿದ್ದಾರೆ. ತಾಲ್ಲೂಕಿನ ಬಾಣಾವರ ಹೋಬಳಿ ಬಸವನಹಳ್ಳಿ ಗ್ರಾಮದ ಹಾಲಪ್ಪ ಮೃತರು. ಪುತ್ರಿ ಜೀವಿತಾ ಅವರಿಗೆ ಗಾಯವಾಗಿದೆ. ಶುಕ್ರವಾರ ತಮ್ಮ ಮಗಳೊಂದಿಗೆ ಬಾಣಾವರದಿಂದ ಊರಿಗೆ ವಾಪಾಸ್ಸಾಗುತ್ತಿದ್ದಾಗ ಹಿಂದಿನಿಂದ ವೇಗವಾಗಿ ಬಂದ ಬಸ್ ಡಿಕ್ಕಿಯಾಗಿದೆ. ಅಪಘಾತದ ರಭಸಕ್ಕೆ ಕೆಳಗೆ ಬಿದ್ದ ಹಾಲಪ್ಪ ಅವರನ್ನು ತಕ್ಷಣವೇ ಆಸ್ಪತ್ರೆಗೆ ದಾಖಲಿಸಲಾಯಿತಾದರೂ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ. ಬಾಣಾವರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮತ್ತೊಂದು ಪ್ರಕರಣದಲ್ಲಿ ಟ್ರ್ಯಾಕ್ಟರ್ ಡಿಕ್ಕಿಯಾಗಿ ಬೈಕ್ ಸವಾರ ಮೃತಪಟ್ಟಿರುವ ಘಟನೆ ನಗರದ ರಾಯಲ್ ಕಾಲೇಜು ಸಮೀಪ ನಡೆದಿದೆ.

ನಗರದ ಮೊಹಮ್ಮದ್ ಅಬೂಬಕರ್ ಮೃತರು. ಗುಜರಿ ವ್ಯಾಪಾರ ಮಾಡಿಕೊಂಡಿದ್ದ ಮೊಹಮ್ಮದ್ ಟಿವಿಎಸ್ ಎಕ್ಸೆಲ್ ಬೈಕ್‌ನಲ್ಲಿ ತೆರಳುತ್ತಿದ್ದಾಗ ಎದುರಿನಿಂದ ಬಂದ ಟ್ರ್ಯಾಕ್ಟರ್ ಡಿಕ್ಕಿಯಾಗಿದೆ. ಗಂಭೀರ ಗಾಯಗೊಂಡಿದ್ದ ಅವರನ್ನು ಹಾಸನದ ಆಸ್ಪತ್ರೆಗೆ ದಾಖಲಿಸಲಾಗಿತ್ತಾದರೂ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## 1.80 ಲಕ್ಷ ರೂ. ನಗದು ಕಳವು

ಆಲೂರು: ಮನೆ ಬಾಗಿಲಲ್ಲೇ ಇಟ್ಟಿದ್ದ ಕೀ ಸಹಾಯದಿಂದ ಪ್ರವೇಶಿಸಿರುವ ಕಳ್ಳರು ಬೀರುವಿನಲ್ಲಿಟ್ಟಿದ್ದ 1.80 ಕ್ಷ ರೂ. ನಗದು ಹಾಗೂ 30 ಗ್ರಾಂ ತೂಕದ ಚಿನ್ನಾಭರಣ ಕಳವು ಮಾಡಿರುವ ಘಟನೆ ತಾಲ್ಲೂಕಿನ ಚಿಗಲೂರು ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಕಲ್ಪನ ಎಂಬುವರ ಮನೆಯಲ್ಲಿ ಕಳ್ಳತನ ನಡೆದಿದ್ದು ಮನೆಯ ಕೀಯನ್ನು ಬಾಗಿಲ ಬಳಿಯೇ ಇಟ್ಟು ಅವರು ಜಮೀನಿಗೆ ತೆರಳಿದ್ದರು.

ಸಂಜೆ 6 ಗಂಟೆಗೆ ಮನೆಗೆ ಬಂದು ನೋಡಿದಾಗ ಕಳ್ಳತನವಾಗಿರುವುದು ತಿಳಿದಿದೆ. ಬಲವಾದ ಆಯುಧದಿಂದ ಬೀರುವಿನ ಬಾಗಿಲು ಮುರಿದಿರುವ ಕಳ್ಳರು 1.80 ಲಕ್ಷ ರೂ. ಹಣ, 30 ಗ್ರಾಂ ತೂಕದ ಚಿನ್ನದ ಸರ ಕದ್ದಿದ್ದಾರೆ. ಆಲೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಡಾ. ಬಿ.ಆರ್. ಅಂಬೇಡ್ಕರ್ ಸೇವೆ ಸ್ಮರಣೀಯ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಅಸ್ಪೃಶ್ಯತೆ ನಿವಾರಣೆ, ಮಹಿಳಾ ಸಮಾನತೆ ಹಾಗೂ ಜಾತಿ ಪದ್ಧತಿ ನಿವಾರಣೆಗಾಗಿ ಹೋರಾಡಿದ ಡಾ. ಬಿ.ಆರ್. ಅಂಬೇಡ್ಕರ್ ಅವರ ಸೇವೆಯನ್ನು ಪ್ರತಿಯೊಬ್ಬರು ಸ್ಮರಿಸಬೇಕು ಎಂದು ಅಂಬೇಡ್ಕರ್ ಸ್ಮಾರಕ ಸಮಿತಿ ರಾಜ್ಯಾಧ್ಯಕ್ಷ ಶ್ರೀಧರ್ ಕಲಿವೀರ್ ತಿಳಿಸಿದರು.

ನಗರದಲ್ಲಿ ಚಂದ್ರಗುಪ್ತ ಮೌರ್ಯ ದಲಿತ ಹೋರಾಟಗಾರರ ಒಕ್ಕೂಟದಿಂದ ಶನಿವಾರ ಏರ್ಪಡಿಸಿದ್ದ ಡಾ.ಬಿ.ಆರ್. ಅಂಬೇಡ್ಕರ್ ಅವರ 134ನೇ ಜಯಂತಿ ಹಾಗೂ ಜಿಲ್ಲಾ ಮಟ್ಟದ ಎರಡು ದಿನಗಳ ತರಬೇತಿ ಶಿಬಿರ ಮತ್ತು ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ಹಣ ಕೊಟ್ಟರೆ ಒಳ್ಳೆಯ ಹಾಲ್‌ಗಳು ಸಿಗುತ್ತದೆ. ಆದರೆ ಅದು ಯಾವ ಸ್ಥಳಕ್ಕೆ ಹೋಗದೆ ಡಾ. ಬಿ.ಆರ್.ಅಂಬೇಡ್ಕರ್ ಹಾಸನಕ್ಕೆ ಬಂದು ಕಾಲಿಟ್ಟಿರುವ ಜಾಗದಲ್ಲಿ ಅರ್ಥಪೂರ್ಣ ಕಾರ್ಯಕ್ರಮ ನಡೆಸಲಾಗುತ್ತಿದೆ ಎಂದರು. ಅಂಬೇಡ್ಕರ್ ಭಾರತ ಮತ್ತು ಇಡೀ ವಿಶ್ವವನ್ನೆ ಸುತ್ತಿದ್ದಾರೆ. ಅಂಬೇಡ್ಕರ್ ಅವರಿಗೆ ಸರ್ಕಾರಿ ಕೆಲಸ ಸಿಗುವ ಅವಕಾಶ ಬಂದಾಗ ಅವರಲ್ಲಿ ಗೊಂದಲ ಉಂಟಾಗಿ ಇಡೀ ದೇಶದಲ್ಲಿರುವ ಕೋಟ್ಯಾಂತರ ಜನರ ಬಗ್ಗೆ ಯೋಚನೆ ಮಾಡಿ ಜನಾಂಗದ ಜನರನ್ನು ನೋಡಿ ಮರುಗಿದರು. ದಲಿತರ ಸ್ಥಿತಿ ನೋಡಿ ಸಮಾನತೆ ಕಲ್ಪಿಸಲು ಸಂವಿಧಾನ ರಚನೆಗೆ ಮುಂದಾದರು. ಶೋಷಿತ ಸಮುದಾಯಕ್ಕೆ ಏಳಿಗೆಗೆ ಹಾಗೂ ಸರ್ವಜನಾಂಗದ ಸಮಾನತೆಗೆ ಅಂಬೇಡ್ಕರ್ ಅವರ ಬರೆದ ಸಂವಿಧಾನ ಮಹತ್ವದ್ದಾಗಿದೆ. ಇದನ್ನು ಎಲ್ಲರೂ ರಕ್ಷಣೆ ಮಾಡುವುದರ ಜೊತೆಗೆ ಅದರ ಬಗ್ಗೆ ಎಲ್ಲರಿಗೂ ಜಾಗೃತಿ ಮೂಡಿಸುವುದು ಅನಿವಾರ್ಯ ಎಂದರು. ಶ್ರೀಧರ್ ಕಲಿವೀರ್, ಹೋರಾಟಗಾರರಾದ ಕೆ. ಈರಪ್ಪ, ನಾರಾಯಣದಾಸ್ ಅವರನ್ನು ಸನ್ಮಾನಿಸಲಾಯಿತು.

## ನವಿಲೆ ಕ್ಷೇತ್ರ ಅಭಿವೃದ್ಧಿಗೆ ಅನುದಾನ ನೀಡಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ತಾಲ್ಲೂಕಿನ ನವಿಲೆ ಗ್ರಾಮದ ಶ್ರೀ ನಾಗೇಶ್ವರ ಕ್ಷೇತ್ರದ ಅಭಿವೃದ್ಧಿಗೆ 2 ಕೋಟಿ ರೂ. ಅನುದಾನ ಕಲ್ಪಿಸುವಂತೆ ಕಾನೂನು ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ ಪಾಟೀಲ್ ಅವರಿಗೆ ಶಾಸಕ ಸಿ.ಎನ್. ಬಾಲಕೃಷ್ಣ ಮನವಿ ಸಲ್ಲಿಸಿದರು.

ವಿಧಾನಸೌಧದ ಕಚೇರಿಯಲ್ಲಿ ಭೇಟಿಯಾದ ಅವರು, ನವಿಲೆ ನಾಗೇಶ್ವರ ಕ್ಷೇತ್ರಕ್ಕೆ ಪ್ರತಿದಿನ ಸಾವಿರಾರು ಭಕ್ತರು ಬರುತ್ತಾರೆ. ಈಗಾಗಲೇ ಕ್ಷೇತ್ರದಲ್ಲಿ ಅನ್ನದಾಸೋಹ ಮಂಟಪ, ಶೌಚಾಲಯದ ವ್ಯವಸ್ಥೆ, ಮುಡಿ ನೀಡಲು ಪ್ರತ್ಯೇಕ ಕೊಠಡಿಗಳನ್ನು ನಿರ್ಮಾಣ ಮಾಡಲಾಗಿದೆ. ಇದರ ಜೊತೆಗೆ ಕ್ಷೇತ್ರದಲ್ಲಿ ಕಲ್ಯಾಣ ಮಂಟಪ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಲಾಗಿದೆ ಎಂದು ಹೇಳಿದರು.




ಪ್ರತಿನಿತ್ಯ ಕ್ಷೇತ್ರಕ್ಕೆ ಬರುವ ಭಕ್ತಾದಿಗಳಿಗೆ ಅನ್ನ ಸಂತರ್ಪಣೆ ನಡೆಯುತ್ತಿದ್ದು, ತಿಪಟೂರು ಹಾಗೂ ಚನ್ನರಾಯಪಟ್ಟಣದ ಮಾರ್ಗ ಮಧ್ಯದಲ್ಲಿ ಬರುವ ಶ್ರೀ ನವಿಲೆ ನಾಗೇಶ್ವರ ಕ್ಷೇತ್ರದ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡುವ ನಿಟ್ಟಿನಲ್ಲಿ ಮಾನ್ಯ ರಾಜ್ಯ ಸರ್ಕಾರದ ಕಾನೂನು ಹಾಗೂ ಪ್ರವಾಸೋದ್ಯಮ ಸಚಿವರಾದ ಎಚ್ ಕೆ ಪಾಟೀಲ್ ಅವರನ್ನು ಭೇಟಿ ಮಾಡಿ ಪುಣ್ಯಕ್ಷೇತ್ರದ ಅಭಿವೃದ್ಧಿಗೆ ಹೆಚ್ಚಿನ ಅನುದಾನ ನೀಡುವಂತೆ ಕ್ಷೇತ್ರದ ಶಾಸಕರಾಗಿ ಒತ್ತಾಯಿಸಿದ್ದೇನೆ ಎಂದು ತಿಳಿಸಿದ್ದಾರೆ.

ಶ್ರೀ ಕುಕ್ಕೆ ಸುಬ್ರಹ್ಮಣ್ಯದಂತೆ ಈ ಕ್ಷೇತ್ರದಲ್ಲೂ ಕೂಡ ಆಶ್ಲೇಷ ಪೂಜೆ, ಸರ್ಪಸಂಸ್ಕಾರ ಪೂಜೆಗಳು ನಡೆಯುತ್ತವೆ. ಬೆಂಗಳೂರು ಸೇರಿದಂತೆ ರಾಜ್ಯದ ನಾನಾ ಭಾಗಗಳಿಂದ ಪ್ರತಿನಿತ್ಯ ಭಕ್ತರು ಸಾವಿರಾರು ಸಂಖ್ಯೆಯಲ್ಲಿ ಆಗಮಿಸುವುದರಿಂದ ಈ ಕ್ಷೇತ್ರಕ್ಕೆ ಹೆಚ್ಚಿನ ಬಸ್ ವ್ಯವಸ್ಥೆ ಹಾಗೂ ಪ್ರವಾಸೋದ್ಯಮಕ್ಕೆ ಈ ಕ್ಷೇತ್ರವನ್ನು ಸೇರ್ಪಡೆ ಮಾಡಿದರೆ ಇನ್ನು ಹೆಚ್ಚು ಪ್ರಸಿದ್ಧಿ ಹೊಂದಲು ಸಾಧ್ಯವಾಗುತ್ತದೆ ಎಂದು ಸಚಿವರ ಗಮನ ಸೆಳೆದಿದ್ದಾರೆ.

ಜೊತೆಗೆ ಈ ಭಾಗದಲ್ಲಿ ಬರುವ ಶ್ರೀ ಅಮರಗಿರಿ ರಂಗನಾಥ ಸ್ವಾಮಿ ದೇವಾಲಯ ಹಾಗೂ ನುಗ್ಗೇಹಳ್ಳಿ ಹೋಬಳಿ ಕೇಂದ್ರದಲ್ಲಿ ಹೊಯ್ಸಳರ ಕಾಲದ ಇತಿಹಾಸ ಪ್ರಸಿದ್ಧ ಶ್ರೀ ಲಕ್ಷ್ಮಿ ನರಸಿಂಹ ಸ್ವಾಮಿ, ಶ್ರೀ ಸದಾಶಿವ ಸ್ವಾಮಿ ದೇವಾಲಯಗಳು ಇರುವುದರಿಂದ ಪ್ರವಾಸೋದ್ಯಮ ಇಲಾಖೆ ವತಿಯಿಂದ ಹೆಚ್ಚಿನ ಸಹಕಾರ ನೀಡುವಂತೆ ಮನವಿ ಮಾಡಿರುವುದಾಗಿ ತಿಳಿಸಿದರು.

# ಸರ್ಕಾರಿ ಶಾಲೆಗೆ ಮಕ್ಕಳನ್ನು ಸೇರಿಸಲು ಸಲಹೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಆಲೂರು: ಪಾಲಕರು ಸರ್ಕಾರಿ ಶಾಲೆಗೆ ಮಕ್ಕಳನ್ನು ದಾಖಲಿಸಿ ಮಕ್ಕಳ ಭವಿಷ್ಯಕ್ಕೆ ಬುನಾದಿ ಹಾಕಬೇಕು ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ ಹಾಗೂ ಕ್ಷೇತ್ರಾ ಸಮನ್ವಯಾಧಿಕಾರಿ ಕಚೇರಿಯಿಂದ ಪಟ್ಟಣದ ಪಿ.ಎಂ.ಶ್ರೀ. ಸರ್ಕಾರಿ ನೂತನ ಹಿರಿಯ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಆಯೋಜಿಸಿದ್ದ ಶಾಲಾ ಪ್ರಾರಂಭೋತ್ಸವ ಮತ್ತು ವಿಶೇಷ ದಾಖಲಾತಿ ಆಂದೋಲನ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಗುಲಾಬಿ ಹೂ ನೀಡಿ ಸ್ವಾಗತಿಸಿ ಮಾತನಾಡಿದರು.

ಕಳೆದ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಆಲೂರು-ಸಕಲೇಶಪುರ ತಾಲ್ಲೂಕಿನ ಸರ್ಕಾರಿ ಶಾಲೆಗಳು ಉತ್ತಮ ಫಲಿತಾಶ ನೀಡಿದ್ದು ಸಕಲೇಶ್ಪುರ ಪ್ರಥಮ ಹಾಗೂ ಆಲೂರು ದ್ವಿತೀಯ ಸ್ಥಾನ ಪಡೆದು ಜಿಲ್ಲೆಯ ಗೌರವವನ್ನು ಹೆಚ್ಚಿಸಿದೆ. ಇತ್ತೀಚಿಗೆ ಸರ್ಕಾರಿ ಶಾಲೆಗಳಲ್ಲಿ ನುರಿತ ಅನುಭವಿ ಗುರು ಬಳಗವಿದೆ. ಸರ್ಕಾರದಿಂದ ಮಧ್ಯಾಹ್ನ ಬಿಸಿಯೂಟ, ಸಮವಸ್ತ್ರ, ಶಾಲಾ ಕಲಿಕಾ ಸಾಮಗ್ರಿ ಸೇರಿದಂತೆ ಹಲವಾರು ಯೋಜನೆಗಳ ಮೂಲಕ ಮಕ್ಕಳ ಶೈಕ್ಷಣಿಕ ಬೆಳವಣಿಗೆಗೆ ಸಹಕಾರಿಯಾಗಿದೆ. ಸರ್ಕಾರಿ ಶಾಲೆಗಳಲ್ಲಿ ಓದಿದ ಎಷ್ಟೋ ವಿದ್ಯಾರ್ಥಿಗಳು ಇಂದು ರಾಜ್ಯ ಹಾಗೂ ರಾಷ್ಟ್ರ ಮಟ್ಟದಲ್ಲಿ ಉನ್ನತ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ ಖಾಸಗಿ ಶಾಲೆಗಳ ಪೈಪೋಟಿ ನಡುವೆ ಸರ್ಕಾರಿ ಶಾಲೆಗಳು ಬಲಗೊಳ್ಳಬೇಕಿದೆ. ಸಮಾನ ಶಿಕ್ಷಣದ ಪರಿಕಲ್ಪನೆ ಉಳಿಯಲು ಪ್ರತಿಯೊಬ್ಬರಿಗೂ ಉಚಿತ ಶಿಕ್ಷಣ ಸಿಗಲು ಸರ್ಕಾರಿ ಶಾಲೆಗಳನ್ನು ಉಳಿಸಿ ಅಭಿವೃದ್ಧಿಪಡಿಸಬೇಕು. ಈ ಕಾರ್ಯಕ್ಕೆ ಸಮಾಜ ಮತ್ತು ಸಮುದಾಯದ ಸಹಕಾರ ಅಗತ್ಯ. ಸರ್ಕಾರಿ ಶಾಲೆಗಳನ್ನು ಉಳಿಸುವ ಪ್ರಯತ್ನಕ್ಕೆ ಪ್ರತಿಯೊಬ್ಬ ಪೋಷಕರು ಕೈ ಜೋಡಿಸಬೇಕು ಎಂದು ಮನವಿ ಮಾಡಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಕೃಷ್ಣೆಗೌಡ ಮಾತನಾಡಿ, ಸರ್ಕಾರ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ, ಕ್ಷೀರಭಾಗ್ಯ, ಉಚಿತ ಪುಸ್ತಕ, ಸಮವಸ್ತ್ರ ನೀಡುತ್ತಿದೆ. ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣದ ಜತೆಗೆ ಉಚಿತ ಸೌಲಭ್ಯಗಳು ಸಿಗುತ್ತಿದ್ದು, ಪೋಷಕರು ಇದರ ಸದುಪಯೋಗ ಪಡೆಯಬೇಕು. ಕಾನ್ವೆಂಟ್ ವ್ಯಾಮೋಹದಿಂದ ಹೊರಬರಬೇಕು. ಸರ್ಕಾರಿ ಶಾಲೆಗಳಲ್ಲಿ ಓದಿದ ಅನೇಕ ಮಹನೀಯರು ದೇಶದ ಉನ್ನತ ಹುದ್ದೆ ಅಲಂಕರಿಸಿದ್ದಾರೆ. ಇಲ್ಲಿ ನುರಿತ ಶಿಕ್ಷಕರಿದ್ದಾರೆ. ಪೋಷಕರು ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ಕಳುಹಿಸಬೇಕು ಎಂದು ಸಲಹೆ ನೀಡಿದರು

ಕಾರ್ಯಕ್ರಮದಲ್ಲಿ ಮಕ್ಕಳಿಗೆ ಸಮವಸ್ತ್ರ ಹಾಗೂ ಶಾಲಾ ಕಲಿಕಾ ಸಾಮಗ್ರಿಗಳನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ವಿಜಯವಾಣಿ ದಿನಪತ್ರಿಕೆ ಓದುಗರಿಗೆ ಆಯೋಜಿಸಿದ್ದ ನಾರಿ ನಿನಗೊಂದು ಸ್ಪಾರ್ಧೆ ಪ್ರಯುಕ್ತ ಶಾಸಕ ಸಿಮೆಂಟ್ ಮಂಜು ಲಕ್ಕಿ ಡಿಪ್ ಚೀಟಿ ಎತ್ತುವ ಮೂಲಕ ಐವರು ಮಹಿಳೆಯರು ವಿಜೇತ ಮಹಿಳೆಯರನ್ನು ಆಯ್ಕೆ ಮಾಡಿದರು.

ತಹಸೀಲ್ದಾರ್ ಮಲ್ಲಿಕಾರ್ಜುನ್, ತಾಲ್ಲೂಕು ಪಂಚಾಯಿತಿ ಇಓ ಸುಬ್ರಹ್ಮಣ್ಯ ಶರ್ಮಾ, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಸಿದ್ದೇಶ್, ದೈಹಿಕ ಟಿಪಿಓ ಗೋವಿಂದೇಗೌಡ, ಪ್ರೌಢ ಶಾಲಾ ಮುಖ್ಯ ಶಿಕ್ಷಕಿ ಶಕುಂತಲಾಶೆಟ್ಟಿ, ಮುಖ್ಯಶಿಕ್ಷಕ ಭೂಪಲಯ್ಯ ಮತ್ತಿತರರಿದ್ದರು.

# ಪದವಿ ಕಾಲೇಜು ಬಳಿ ಬಸ್ ನಿಲುಗಡೆಗೆ ಸೂಚನೆ



ಅರಕಲಗೂಡು: ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಬಳಿ ಎಲ್ಲಾ ಸಾರಿಗೆ ಬಸ್‌ಗಳನ್ನು ನಿಲುಗಡೆಗೊಳಿಸಿ ಕಾಲೇಜಿಗೆ ಬರುವ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸಬೇಕೆಂದು ಶಾಸಕ ಎ.ಮಂಜು ಬಸ್ ಘಟಕಗಳ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಕಾಲೇಜಿಗೆ ಭೇಟಿ ನೀಡಿದ ವೇಳೆ ವಿದ್ಯಾರ್ಥಿಗಳು ಬಸ್ ನಿಲುಗಡೆ ಮಾಡದೇ ಅವಾಚ್ಯ ಶಬ್ದಗಳಿಂದ ನಿಂದಿಸಿ ನಿಲುಗಡೆ ಮಾಡಲು ನಿರಾಕರಿಸುತ್ತಾರೆ ಎಂದು ಶಾಸಕರೊಂದಿಗೆ ಅಳಲು ತೋಡಿಕೊಂಡರು. ಕೂಡಲೇ ವಿದ್ಯಾರ್ಥಿಗಳೊಂದಿಗೆ ಕಾಲಿಜಿನಿಂದ ಹೊರಬಂದು ಅರಕಲಗೂಡು, ಹೊಳೆನರಸೀಪುರ ರಸ್ತೆ ಮಧ್ಯೆ ನಿಂತು ಎರಡು ಕಡೆಯಿಂದ ಬರುವ ಗ್ರಾಮೀಣ ಸಾರಿಗೆ ಬಸ್ಸುಗಳನ್ನ ತಡೆದರು. ವಿಷಯ ತಿಳಿದು ಸ್ಥಳಕ್ಕೆ ಆಗಮಿಸಿದ ರಾಮನಾಥಪುರ, ಅರಕಲಗೂಡು ಬಸ್ ಘಟಕಗಳ ವ್ಯವಸ್ಥಾಪಕರನ್ನು ತರಾಟೆಗೆ ತೆಗೆದುಕೊಂಡರು. ಕಾಲೇಜಿಗೆ ಹೆಚ್ಚಿನ ಸಂಖ್ಯೆಯಲ್ಲಿ ಗ್ರಾಮೀಣ ಭಾಗದ ಬಡಮಕ್ಕಳೇ ಬರುತ್ತಿದ್ದಾರೆ. ಅರಕಲಗೂಡು ಪಟ್ಟಣದಿಂದ ಬರುವ ಮತ್ತು ಹೊಳೆನರಸೀಪುರ ಕಡೆಯಿಂದ ಬರುವ ಸಾರಿಗೆ ಬಸ್‌ಗಳನ್ನು ಕಡ್ಡಾಯವಾಗಿ ಕಾಲೇಜು ಬಳಿ ನಿಲುಗಡೆಮಾಡಬೇಕು. ಮತ್ತೆ ಬಸ್ ನಿಲುಗಡೆಮಾಡುತ್ತಿಲ್ಲ ಎಂದು ವಿದ್ಯಾರ್ಥಿಗಳಿಂದ ದೂರುಬಂದರೇ ಮುಲಾಜಿಲ್ಲದೇ ನಿಮ್ಮ ವಿರುದ್ಧ ಕ್ರಮ ಕೈಗೊಳ್ಳಲಾಗುವುದು. ಇದಕ್ಕೆ ಅವಕಾಶ ಮಾಡಿಕೊಡದೇ ಕ್ರಮವಹಿಸಿ ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

# ಮಲೆನಾಡು ತಾಂತ್ರಿಕ ಕಾಲೇಜು ರಾಜ್ಯಾದ್ಯಂತ ಹೆಸರುವಾಸಿ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ರಾಜ್ಯದ ಪ್ರಮುಖ ಎಂಜಿನೀಯರಿಂಗ್ ಕಾಲೇಜುಗಳಲ್ಲಿ ಹಾಸನದ ಮಲೆನಾಡು ತಾಂತ್ರಿಕ ಕಾಲೇಜಿಗೆ ಒಳ್ಳೆಯ ಹೆಸರಿದೆ. ಇಲ್ಲಿ ಕಲಿತ ವಿದ್ಯಾರ್ಥಿಗಳು ಉನ್ನತ ಸ್ಥಾನ ತಲುಪಿದ್ದಾರೆ ಎಂದು ಸಂಸದ ಶ್ರೇಯಸ್ ಪಟೇಲ್ ಅವರು ಹೇಳಿದರು.

ಮಲೆನಾಡು ಎಂಜಿನೀಯರಿಂಗ್ ಕಾಲೇಜು ವತಿಯಿಂದ ಹಮ್ಮಿಕೊಂಡಿರುವ ಮಲೆನಾಡು ವಾರ್ಷಿಕೋತ್ಸವದ 2ನೇ ದಿನದ ಕಾರ್ಯಕ್ರಮದಲ್ಲಿ ಶುಕ್ರವಾರ ಮಾತನಾಡಿ, ವಿದ್ಯಾರ್ಥಿಗಳು ಓದುವ ವಯಸ್ಸಿನಲ್ಲಿ ಬೇರೆ ವಿಷಯಗಳತ್ತ ಗಮನ ಹರಿಸಬಾರದು. ಅತಿಯಾದ ಮೊಬೈಲ್ ಬಳಕೆ, ದುಶ್ಚಟಕ್ಕೆ ದಾಸರಾಗುವುದು ಸೇರಿದಂತೆ ಯಾವುದೇ ತಪ್ಪು ದಾರಿ ಹಿಡಿಯಬಾರದು ಎಂದು ಸಲಹೆ ನೀಡಿದರು.

ಅಂತಿಮ ವರ್ಷದ ವಿದ್ಯಾರ್ಥಿಗಳು ಕಿರಿಯರಿಗೆ ಮಾರ್ಗದರ್ಶಕರಾಗಬೇಕು. ಮುಂದೆ ಪದವಿ ಪಡೆದ ಮೇಲೆ ತಮ್ಮ ವೃತ್ತಿ ಜೀವನದಲ್ಲಿ ಸಮಾಜಮುಖಿಯಾಗಿ ಕೆಲಸ ಮಾಡಿ ಎಂದರು.

ಉದ್ಯಮಿ ಹೆಚ್.ಬಿ. ಕುಮಾರ್ ಮಾತನಾಡಿ, ಮಲೆನಾಡು ಎಂಜಿನೀಯರಿಂಗ್ ಕಾಲೇಜು ಕಟ್ಟಲು ಅನೇಕ ಹಿರಿಯರು ಶ್ರಮ ವಹಿಸಿದ್ದಾರೆ. ನೂರಾರು ಜನರ ಪರಿಶ್ರಮದಿಂದ ಉದಯವಾದ ಕಾಲೇಜು ಇಂದು ಒಳ್ಳೆಯ ಹೆಸರು ಪಡೆದಿದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಅಧ್ಯಕ್ಷ ಆರ್.ಟಿ. ದ್ಯಾವೇಗೌಡ, ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಚೌಡುವಳ್ಳಿ ಜಗದೀಶ್, ಉಪಾಧ್ಯಕ್ಷ ಅರ್ಜುನ್ ಗುರುದೇವ್ ಮಾತನಾಡಿದರು.

ಮಲೆನಾಡು ತಾಂತ್ರಿಕ ಶಿಕ್ಷಣ ಸಂಸ್ಥೆ ಉಪಾಧ್ಯಕ್ಷ ಬಿ.ಆರ್. ಗುರುದೇವ್, ಖಜಾಂಚಿ ಹೆಚ್.ಡಿ. ಪಾರ್ಶ್ವನಾಥ್, ಎಂಬಿಎ ಕಾಲೇಜು ಉಪಾಧ್ಯಕ್ಷ ಡಿ.ಬಿ. ಹೇಮಂತ್ ಕುಮಾರ್, ಬಿ.ಆರ್. ರಾಜಶೇಖರ್, ನಿರ್ದೇಶಕರಾದ ಶಂಕರ್, ಹೆಚ್. ಸುರೇಶ್, ಪ್ರಾಂಶುಪಾಲ ಡಾ. ಎ.ಜೆ. ಕೃಷ್ಣಯ್ಯ ಮತ್ತಿತರರಿದ್ದರು.

# ಶಾಲಾರಂಭಕ್ಕೆ ಎತ್ತಿನಗಾಡಿ ಮೆರವಣಿಗೆ ಮೆರಗು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಕಲಗೂಡು : ತಾಲ್ಲೂಕು ಆಡಳಿತ, ಕ್ಷೇತ್ರಶಿಕ್ಷಣಾಧಿಕಾರಿ ಕಚೇರಿ ಮತ್ತು ಕೋಟೆ ಸರ್ಕಾರಿ ಪ್ರೌಢಶಾಲೆ ಸಂಯುಕ್ತಾಶ್ರಯದಲ್ಲಿ ತಾಲ್ಲೂಕು ಹಂತದ ದಾಖಲಾತಿ ಆಂದೋಲನಾ ಹಾಗೂ ಶೈಕ್ಷಣಿಕ ಸಾಲಿನ ಶಾಲಾ ಪ್ರಾರಂಭೋತ್ಸವಕ್ಕೆ ಎತ್ತಿನಗಾಡಿಯಲ್ಲಿ ಅಕ್ಷರ ಬುತ್ತಿ ತಯಾರಿಸಿ ಮೆರವಣಿಗೆ ಮೂಲಕ ವಿನೂತನವಾಗಿ ಚಾಲನೆ ನೀಡಲಾಯಿತು.



ಪಟ್ಟಣದ ಕೋಟೆ ಸರ್ಕಾರಿ ಪ್ರೌಢಶಾಲೆ ಆವರಣದಿಂದ ಆರಂಭಗೊಂಡ ಅಕ್ಷರ ಬಂಡಿಯನ್ನು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಪಿ. ನಾರಾಯಣ್ ಅವರು ಇತರೆ ಅಧಿಕಾರಿಗಳು, ಶಿಕ್ಷಕರೊಂದಿಗೆ ಏರಿ ಬಂಡಿಯನ್ನು ಓಡಿಸುವ ಮೂಲಕ ವಿದ್ಯುಕ್ತ ಚಾಲನೆ ನೀಡಿದರು. ಕೋಟೆ.ಪೇಟೆ ಮುಖ್ಯ ರಸ್ತೆಯಲ್ಲಿ ಎತ್ತಿನಗಾಡಿಯನ್ನು ಓಡಿಸಿ ನೋಡುಗರು ಬೆರಗಾಗುವಂತೆ ಮಾಡಿದರು.

ಅಕ್ಷರ ಬಂಡಿಯೊಂದಿಗೆ ವಾದ್ಯಗೋಷ್ಠಿ, ಪಟ್ಟಣದ ವಿವಿಧ ಶಾಲಾ ಮಕ್ಕಳು ಹಾಗೂ ಶಿಕ್ಷಕರು ಜಾಥದಲ್ಲಿ ಪಾಲ್ಗೊಂಡು ಸರಕಾರಿ ಶಾಲೆಗಳಲ್ಲಿ ದೊರೆಯುವ ಉಚಿತ ಶಿಕ್ಷಣ, ಸವಲತ್ತು ಬಳಸಿಕೊಳ್ಳುವತ್ತ ಪೋಷಕರು ಗಮನ ಹರಿಸಬೇಕು ಎಂದು ಘೋಷಣೆ ಕೂಗಲಾಯಿತು.

ಬಿಇಒ ನಾರಾಯಣ್ ಮಾತನಾಡಿ, ಸರ್ಕಾರಿ ಶಾಲೆಗಳು, ಶಿಕ್ಷಕರ ಮೇಲೆ ಸಂಪೂರ್ಣವಾಗಿ ನಂಬಿಕೆ ಇಟ್ಟು ತಮ್ಮ ಮಕ್ಕಳನ್ನು ಹೆಚ್ಚಿನ ಸಂಖ್ಯೆಯಲ್ಲಿ ದಾಖಲಿಸುವ ಮೂಲಕ ಶಿಕ್ಷಣ ಇಲಾಖೆಯ ಆಶಯವನ್ನು ಈಡೇರಿಸಿ. ನಿಮ್ಮ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಯೇ ನಮ್ಮ ಗುರಿಯಾಗಿದೆ. ಗುಣಮಟ್ಟದ ಶಿಕ್ಷಣ ನೀಡುವುದೇ ನಮ್ಮ ಪ್ರಮುಖ ಧ್ಯೇಯ. ಪ್ರತಿ ಹಂತದಲ್ಲಿಯೂ ಕೂಡ ಮಕ್ಕಳ ಕಲಿಕೆ ಬಗ್ಗೆ ಅಧಿಕಾರಿಗಳು, ಶಿಕ್ಷಕರನ್ನು ನೇರವಾಗಿ ಪ್ರಶ್ನಿಸಿ ಪರಿಹಾರ ಕಂಡುಕೊಳ್ಳುವ ಮುಕ್ತ ಅವಕಾಶವನ್ನು ಕಲ್ಪಿಸುತ್ತಿದ್ದೇವೆ ಎಂದು ಭರವಸೆ ನೀಡಿದರು.

ಈ ದೇಶಕ್ಕೆ ಅನ್ನಕೊಡುವ ರೈತ ಭೂಮಿತಾಯಿ ನಂಬಿ ಕೃಷಿ ಕಾಯಕದಲ್ಲಿ ತೊಡಗುತ್ತಾನೆ.ಅದೇ ನಿಟ್ಟಿನಲ್ಲಿ ನಮ್ಮ ನಂಬಿಕೆ, ಸಂಸ್ಕೃತಿಯಲ್ಲಿ ಗೋವುಗಳಿಗೆ ಮಾತೃ ಸ್ಥಾನವನ್ನು ನೀಡಿದ್ದೇವೆ. ಆ ಸಲುವಾಗಿಯೇ ಇಂದು ಗೋವುಗಳ ಮೂಲಕ ಎತ್ತಿನ ಬಂಡಿಯಲ್ಲಿ ಅಕ್ಷರ ಕಲಿಸುವ ಕಾಯಕವನ್ನು ವಿನೂತನವಾಗಿ ಕೈಗೊಂಡಿದ್ದೇವೆ. ಇದು ನಮ್ಮ ಶೈಕ್ಷಣಿಕ ಸಾಲಿನ ಅಭ್ಯುದಯಕ್ಕೆ ನಾಂದಿಯ ಸಂಕೇತವಾಗಿದೆ. ಮಕ್ಕಳನ್ನು ಸರಕಾರಿ ಶಾಲೆಗಳಿಗೆ ಸೇರಿಸಿ ಬಲವರ್ಧನೆಗೊಳಿಸುವಂತೆ ಅವರು ಮನವಿ ಮಾಡಿದರು.

ಕೋಟೆ ಸರ್ಕಾರಿ ಪ್ರೌಢ ಶಾಲೆಯ ಮುಖ್ಯ ಶಿಕ್ಷಕರು ಆಗಿರುವ ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ರಂಗಸ್ವಾಮಿ ಮಾತನಾಡಿ, ಕಳೆದ ಸಾಲಿನ ಎಸ್ಸೆಸ್ಸೆಲ್ಸಿ ಫಲಿತಾಂಶದಲ್ಲಿ ನಿರೀಕ್ಷೆಗೂ ಮೀರಿ ಉತ್ತಮ ಫಲಿತಾಂಶವನ್ನು ಕ್ಷೇತ್ರದ ಶಾಸಕ ಎ. ಮಂಜು ಮತ್ತು ಬಿಇಒ ನಾರಾಯಣ್ ಅವರ ಮಾರ್ಗದರ್ಶನದಲ್ಲಿ ಪಡೆದಿದ್ದೇವೆ. ಈ ಸಾಲಿನ ಫಲಿತಾಂಶ ಮೊದಲ ಮೂರು ಸ್ಥಾನಗಳಲ್ಲಿ ಒಂದಾಗಿರುತ್ತದೆ. ಶಾಲೆಯ ಆರಂಭದ ದಿನಗಳಿಂದಲೇ ಕಲಿಕೆ ಒತ್ತುನೀಡುವ ಯೋಜನೆ ಸಿದ್ಧವಾಗಿದೆ. ಶಿಕ್ಷಣ ಇಲಾಖೆ ಮೇಲೆ ಸಂಪೂರ್ಣವಾಗಿ ವಿಶ್ವಾಸವಿಟ್ಟು ಮಕ್ಕಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಸೇರಿಸಿ. ನಿಮ್ಮ ನಿರೀಕ್ಷೆಯನ್ನು ಸುಳ್ಳುಮಾಡದೇ ಸಹಕಾರಗೊಳಿಸುತ್ತೇವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಬಿಆರ್‌ಸಿ ಬಾಲಾರಾಜ್, ಎಲ್ಲಾ ಇಸಿಒ, ಸಿಆರ್‌ಪಿ, ಬಿಆರ್‌ಪಿ, ಶಾಲಾಭಿವೃದ್ಧಿ ಸಮಿತಿ ಸದಸ್ಯರು, ಶಿಕ್ಷಕರು ವಿದ್ಯಾರ್ಥಿಗಳು ಭಾಗವಹಿಸಿ ಯಶಸ್ವಿಗೊಳಿಸಿದರು. ಮಕ್ಕಳಿಗೆ ಸಾಂಕೇತಿಕವಾಗಿ ಪಠ್ಯಪುಸ್ತಕ ವಿತರಿಸಲಾಯಿತು.

# ಬಕ್ರೀದ್: ಪೊಲೀಸರಿಂದ ಶಾಂತಿ ಸಭೆ



ಅರೇಹಳ್ಳಿ: ತ್ಯಾಗ ಬಲಿದಾನದ ಸಂಕೇತವಾದ ಮುಸ್ಲಿಮರ ಬ್ರಕೀದ್ ಆಚರಣೆ ಜೂ. 7ರಂದು ನಡೆಯಲಿದ್ದು ಹಬ್ಬದ ವೇಳೆ ಶಾಂತಿ ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಪೊಲೀಸ್ ಠಾಣೆಯಲ್ಲಿ ವಿವಿಧ ಧರ್ಮದ ಮುಖಂಡರೊಂದಿಗೆ ಶಾಂತಿ ಸಭೆ ನಡೆಯಿತು.

ಈ ವೇಳೆ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಶೋಭ ಭರಮಣ್ಣನವರ್ ಮಾತನಾಡಿ, ನಮ್ಮ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಎಲ್ಲಾ ಧರ್ಮದವರು ಪ್ರತಿ ನಿತ್ಯ ಹೇಗೆ ಶಾಂತಿ ಸೌಹಾರ್ದತೆಯನ್ನು ಕಾಪಾಡುತ್ತಿರೋ ಅದೇ ರೀತಿ ಮುಂಬರುವ ಹಬ್ಬದ ದಿನಗಳಲ್ಲಿಯೂ ಇದ್ದು ಕಾನೂನು ಸುವ್ಯವಸ್ಥೆಯನ್ನು ಕಾಪಾಡಲು ಸಹಕರಿಸಬೇಕು. ಹಬ್ಬದ ವೇಳೆ ಯಾರೊಬ್ಬರು ವದಂತಿಗಳಿಗೆ ಕಿವಿಗೊಡದೆ ಸೌಹರ್ದತೆಯನ್ನು ಕಾಪಾಡುತ್ತಾ ಯಾವುದೇ ರೀತಿಯ ಅವಘಡಗಳಿಗೆ ಅವಕಾಶ ನೀಡಬಾರದು. ಯಾವುದೇ ಅಹಿತಕರ ಘಟನೆಗಳು ಕಂಡು ಬಂದಲ್ಲಿ ನಮಗೆ ಮಾಹಿತಿ ನೀಡಬೇಕು ಎಂದರು.

ಗ್ರಾಮದ ಮುಖಂಡರಾದ ವಿಘ್ನೇಶ್, ಗಂಗಾಧರ್, ಮುಜೀಬ್ ಉರ್ ರೆಹಮಾನ್, ವಿಘ್ನೇಶ್ ಸೇರಿ ಇನ್ನಿತರರು ಉಪಸ್ಥಿತರಿದ್ದರು.

# ತೆಂಗು ಬೆಳೆ ಪುನಶ್ಚೇತನಕ್ಕೆ ಅಧಿಕಾರಿಗಳು ಗಮನ ಹರಿಸಿ

## ಶಾಸಕ ಕೆ.ಎಂ. ಶಿವಲಿಂಗೇಗೌಡ ಸೂಚನೆ | ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಸೀಕೆರೆ: ತಾಲ್ಲೂಕಿನ ಪ್ರಮುಖ ಬೆಳೆಯಾಗಿರುವ ತೆಂಗು ಬೆಳೆ ಪುನಶ್ಚೇತನಕ್ಕೆ ತೋಟಗಾರಿಕೆ ಅಧಿಕಾರಿಗಳು ಸಮರೋಪಾದಿಯಲ್ಲಿ ಕಾರ್ಯೋನ್ಮುಖರಾಗಬೇಕು ಎಂದು ಗೃಹಮಂಡಳಿ ಅಧ್ಯಕ್ಷ ಕೆ.ಎಂ. ಶಿವಲಿಂಗೇಗೌಡ ಸೂಚಿಸಿದರು.




ತಾಲ್ಲೂಕು ಪಂಚಾಯಿತಿ ಸಾಮರ್ಥ್ಯಸೌಧ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, 80 ರೂ. ತೆತ್ತು ತೆಂಗಿನ ಕಾಯಿಕೊಳ್ಳುವ ಸನ್ನಿವೇಶ ಸೃಷ್ಟಿಯಾಗಿದೆ. ತೋಟಗಾರಿಕೆ ಅಧಿಕಾರಿಗಳ ನಿರ್ಲಕ್ಷ್ಯ ಧೋರಣೆಯಿಂದಾಗಿ ತೆಂಗು ಬೆಳೆಗಾರರಿಗೆ ಉತ್ತರ ನೀಡಲು ಸಾಧ್ಯವಾಗುತ್ತಿಲ್ಲ ಎಂದರು.

ತೋಟಗಾರಿಕಾ ಸಹಾಯಕ ನಿರ್ದೇಶಕಿ ಸೀಮಾ ಮಾತನಾಡಿ, ಗಂಡಸಿ, ಜಾವಗಲ್, ಬಾಣಾವರ, ಕಸಬಾ ಹಾಗೂ ಕಣಕಟ್ಟೆ ಹೋಬಳಿ ವ್ಯಾಪ್ತಿಯಲ್ಲಿ ಅಂದಾಜು 52 ಸಾವಿರ ಹೆಕ್ಟೇರ್‌ನಲ್ಲಿ ತೆಂಗು ಬೆಳೆಯಿದೆ. ರಸ ಸೋರುವಿಕೆ, ಕಪ್ಪುತಲೆ ಹುಳುವಿನ ಬಾಧೆ, ಗರಿ ರೋಗ ಸೇರಿ ಹತ್ತು ಹಲವು ಕಾರಣದಿಂದಾಗಿ ಫಸಲು ಸಂಪೂರ್ಣ ಕೈಕೊಟ್ಟಿದೆ. ರೋಗ ನಿಯಂತ್ರಣಕ್ಕೆ ಸಿದ್ದತೆ ಮಡಿಕೊಂಡಿದ್ದೇವೆ ಎಂದು ಸಭೆಗೆ ಮಾಹಿತಿ ನೀಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ಶಿವಲಿಂಗೇಗೌಡ ಅವರು, ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಚುನಾಯಿತ ಜನಪ್ರತಿನಿಧಿಗಳು, ರೈತರು ಹಾಗೂ ಅಧಿಕಾರಿಗಳ ಸಭೆ ಕರೆಯಬೇಕು. ಈ ಸಂಬಂಧ ತೋಟಗಾರಿಕಾ ಸಚಿವರೊಂದಿಗೆ ಮಾತನಾಡಲು ಸಿದ್ಧನಿದ್ದೇನೆ. ಇದಕ್ಕೆ ಪೂರಕವಾಗಿ ಅಧಿಕಾರಿಗಳು ಸ್ಪಂದಿಸಬೇಕು ಎಂದು ಸೀಮಾ ಅವರಿಗೆ ತಾಕೀತು ಮಾಡಿದರು. ಅಲ್ಲದೆ ಜಂಟಿ ನಿರ್ದೇಶಕಿ ಮಂಗಳಾ ಅವರಿಗೂ ದೂರವಾಣಿ ಕರೆ ಮಾಡಿ ವಾಸ್ತವ ತೆರೆದಿಟ್ಟು ಸಂಕಷ್ಟಕ್ಕೆ ಸಿಲುಕಿರುವ ಬೆಳೆ ರಕ್ಷಿಸದಿದ್ದರೆ ಉಳಿಗಾಲವಿಲ್ಲ. ಎಲ್ಲರೂ ಸಮರೋಪಾದಿಯಲ್ಲಿ ಒಗ್ಗೂಡಿ ಕೆಲಸ ಮಾಡಬೇಕಿದ್ದು ಸೂಕ್ತ ತಯಾರಿ ಮಾಡಿಕೊಳ್ಳಿ ಎಂದು ಸೂಚ್ಯವಾಗಿ ಹೇಳಿದರು.

## ಜೋಳಕ್ಕೆ ರೋಗಬಾಧೆ

ಬಿತ್ತನೆಯಾಗಿರುವ ಮುಸುಕಿನ ಜೋಳಕ್ಕೆ ರೋಗಬಾಧೆ ವಿಪರೀತವಾಗಿದೆ. ನಿಯಂತ್ರಣ ಅಸಾಧ್ಯವಾಗಿದೆ. ನಿರ್ದಿಷ್ಟ ಕಂಪನಿಯ ಬೀಜ ಬಳಕೆಗೆ ಅವಕಾಶ ಮಾಡಿಕೊಡಬೇಕು. ಕಳಪೆ ದಾಸ್ತಾನು ಮಾರಾಟ ಮಾರಾಟ ಮಾಡಿರುವವರ ವಿರುದ್ಧ ಕ್ರಮ ಜರುಗಿಸಬೇಕು ಎಂದು ಕೆಡಿಪಿ ಸದಸ್ಯ ಗಂಡಸಿ ಅಯ್ಯಣ್ಣ ಗಮನಸೆಳೆದರು.

ಕೃಷಿ ಸಹಾಯಕ ನಿರ್ದೇಶಕ ಎ.ಪಿ.ಶಿವಕುಮಾರ್ ಮಾತನಾಡಿ, ಪದೇ ಪದೇ ಒಂದೇ ಬಗೆಯ ಬೆಳೆ ಬೆಳೆಯುತ್ತಿರುವುದರಿಂದ ಇಳುವರಿ ಕೊರತೆ, ರೋಗಬಾಧೆ ಕಂಡುಬರುತ್ತಿದೆ. ರೈತರು ಹೆಸರು, ಅಲಸಂದೆ, ಉದ್ದು ಸೇರಿ ಪರ್ಯಾಯ ಬೆಳೆ ಬೆಳೆದಲ್ಲಿ ರೋಗ ನಿಯಂತ್ರಣ ಸಾಧ್ಯವಾಗಲಿದೆ ಎಂದರು.

ಕಳಪೆ ಬಿತ್ತನೆ ಬೀಜ ವಿತರಣಾ ಕಂಪನಿ ವಿರುದ್ಧ ಕ್ರಮ ಜರುಗಿಸುವ ಕುರಿತು ಸಭೆಯಲ್ಲಿ ತೀರ್ಮಾನಿಸಲಾಯಿತು. ತಾಲೂಕಿನಲ್ಲಿ ರೇಷ್ಮೆ ಕೃಷಿ ವಿಸ್ತರಣೆ ಅಗತ್ಯತೆ ಕುರಿತು ಗಮನ ಸೆಳೆಯಲಾಯಿತು. ಅರಣ್ಯ, ಅಬಕಾರಿ, ಆಹಾರ, ಶಿಕ್ಷಣ, ಆರೋಗ್ಯ, ಸಮಾಜ ಕಲ್ಯಾಣ, ಬಿಸಿಎ, ಎತ್ತಿನಹೊಳೆ, ಲೋಕೋಪಯೋಗಿ ಸೇರಿದಂತೆ ವಿವಿಧ ಇಲಾಖೆಗಳ ಪ್ರಗತಿ ಕುರಿತು ಸುದೀರ್ಘ ಚರ್ಚೆ ನಡೆಯಿತು. ತಹಸೀಲ್ದಾರ್ ಎಂ.ಜಿ.ಸಂತೋಷ್ ಕುಮಾರ್, ತಾಪಂ ಇಒ ಸತೀಶ್, ಗ್ಯಾರಂಟಿ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ಗೀಜಿಹಳ್ಳಿ ಧರ್ಮಶೇಖರ್, ಗ್ರಾಮಾಂತರ ಠಾಣೆ ಸಿಪಿಐ ಅರುಣ್ ಕುಮಾರ್, ಪೌರಾಯುಕ್ತ ಎಚ್.ಟಿ. ಕೃಷ್ಣಮೂರ್ತಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಕೆಡಿಪಿ ಸದಸ್ಯರು ಪಾಲ್ಗೊಂಡಿದ್ದರು.

# ಇತಿಹಾಸದಲ್ಲಿ ಈ ದಿನ

## ಜೂನ್ -1

**1999:** ಕಾರ್ಗಿಲ್ ಯುದ್ಧದ ಸಂದರ್ಭದಲ್ಲಿ ಭಾರತೀಯ ವಾಯುಪಡೆ (ಐಎಎಫ್) ಆಪರೇಷನ್ ಸಫೇದ್ ಸಾಗರ್ ಎಂಬ ಹೆಸರಿನಲ್ಲಿ ಮಹತ್ವದ ಯುದ್ಧ ಕಾರ್ಯಾಚರಣೆಯನ್ನು ಆರಂಭಿಸಿತು. ಈ ಆಪರೇಷನ್ ಮೂಲಕ ಪಾಕಿಸ್ತಾನದ ಸೇನೆಯು ಕಬಳಿಸಿದ್ದ ಹಿಮಾಲಯದ ಎತ್ತರದ ಪ್ರದೇಶಗಳನ್ನು ಪುನಃ ವಶಪಡಿಸಿಕೊಳ್ಳಲಾಯಿತು. ಭಾರತೀಯ ವಾಯುಪಡೆಯ ಇತಿಹಾಸದಲ್ಲಿ ಇದು ಪ್ರಮುಖ ಮೈಲಿಗಲ್ಲು ಎಂದು ಪರಿಗಣಿಸಲಾಗಿದೆ.

**1533:** ಎನ್. ಬೊಲಿನ್, ಇಂಗ್ಲೆಂಡಿನ ರಾಜ ಹೆನ್ರಿ ಎಂಟನೇ ಅವರ ಎರಡನೇ ಪತ್ನಿಯಾಗಿ, 1533ರ ಜೂನ್ 1ರಂದು ರಾಣಿಯಾಗಿ ಪಟ್ಟ ಧರಿಸಿದರು. ಅವರು ಇಂಗ್ಲೆಂಡ್‌ನ ರಾಣಿ ಎಲಿಜಬೆತ್ ಪ್ರಥಮರ ತಾಯಿ.

**2001:** ನೇಪಾಳದ ಯುವರಾಜ ದೀಪೇಂದ್ರ, ರಾಜ ಬೀರೇಂದ್ರ ಮತ್ತು ಅವರ ಕುಟುಂಬದ ಹಲವರನ್ನು ಹತ್ಯೆ ಮಾಡಿದರು. ಈ ಘಟನೆ ನೇಪಾಳದ ರಾಜವಂಶದ ಇತಿಹಾಸದಲ್ಲಿ ಮಹತ್ವದ ತಿರುವು ತಂದಿತು.

### ಜನನ

**1975:** ಕರ್ಣಂ ಮಲ್ಲೇಶ್ವರಿ, ಭಾರತದ ಪ್ರಸಿದ್ಧ ತೂಕ ಎತ್ತುವ ಕ್ರೀಡಾಪಟು. ಅವರು 2000ರ ಸಿಡ್ನಿ ಒಲಿಂಪಿಕ್ಸ್‌ನಲ್ಲಿ ಕಂಚಿನ ಪದಕ ಗೆದ್ದು, ಒಲಿಂಪಿಕ್ಸ್‌ನಲ್ಲಿ ಪದಕ ಗೆದ್ದ ಮೊದಲ ಭಾರತೀಯ ಮಹಿಳೆಯಾಗಿ ದಾಖಲೆ ಬರೆದಿದ್ದಾರೆ.

### ಮರಣ

**1996:** ಭಾರತದ ಐದನೇ ರಾಷ್ಟ್ರಪತಿಯಾಗಿದ್ದ ನೀಲಂ ಸಂಜೀವ ರೆಡ್ಡಿ, 1977 ರಿಂದ 1982ರ ವರೆಗೆ ರಾಷ್ಟ್ರಪತಿಯಾಗಿ ಸೇವೆ ಸಲ್ಲಿಸಿದರು.

# ವ್ಯಕ್ತಿ ಶವ ಹುಡುಕುವಾಗ ಮತ್ತೊಂದು ಶವ ಪತ್ತೆ



ಸಕಲೇಶಪುರ: ಕಾಣೆಯಾದ ವ್ಯಕ್ತಿಯೊಬ್ಬರ ಶವವನ್ನು ಹುಡುಕಿಕೊಂಡು ಹೋದಾಗ ಮತ್ತೊಂದು ಶವ ಸಿಕ್ಕಿರುವ ಘಟನೆ ತಾಲೂಕಿನ ಹಾನುಬಾಳ್ ಹೋಬಳಿಯಲ್ಲಿ ನಡೆದಿದೆ. ತಾಲ್ಲೂಕಿನ ಹಾನುಬಾಳ್ ಹೋಬಳಿ ದೇವಾಲದಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕುಮಾರಹಳ್ಳಿ ಸಮೀಪದ ಕೆರೆಯೊಂದರಲ್ಲಿ ತಿಗನಹಳ್ಳಿ ಗ್ರಾಮದ ನಂಜಯ್ಯ (53) ಎಂಬುವರ ಶವ ಪತ್ತೆಯಾಗಿದೆ. ಈ ಕುರಿತು ಮಾಹಿತಿ ಪಡೆದು ಶವವನ್ನು ಎತ್ತಲು ಹೋದಾಗ ಸಮೀಪದ ಜಾಗವೊಂದರಲ್ಲಿ ಮತ್ತೊಂದು ಶವ ಪತ್ತೆಯಾಗಿದೆ. ಈ ಮೃತದೇಹ ಚಿಕ್ಕಮಗಳೂರು ಮೂಲದ ಕಾರ್ಮಿಕ ಮುರುಗೇಶ್ (60) ಎಂಬಾತನದ್ದು ಎಂದು ತಿಳಿದುಬಂದಿದೆ. ಈತ ಹೃದಯಾಘಾತದಿಂದ ಮೃತಪಟ್ಟಿರುವುದಾಗಿ ತಿಳಿದುಬಂದಿದೆ. ಮೃತ ನಂಜಯ್ಯ ಕಳೆದ ಒಂದು ವಾರದಿಂದ ನಾಪತ್ತೆಯಾಗಿದ್ದು, ದನ ಮೇಯಿಸುವಾಗ ಕೆರೆಗೆ ಬಿದ್ದು ಸಾವನ್ನಪ್ಪಿರುವುದಾಗಿ ತಿಳಿದುಬಂದಿದೆ. ಸಕಲೇಶಪುರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮನೆ ಗೋಡೆ ಕುಸಿದು 2 ಕುರಿ ಸಾವು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್




ಅರಸೀಕೆರೆ: ಬಿರುಗಾಳಿ ಸಹಿತ ಜೋರು ಮಳೆಗೆ ಶಿಥಿಲಾವಸ್ಥೆ ತಲುಪಿದ್ದ ಮನೆ ಗೋಡೆ ಕುಸಿದು ಎರಡು ಕುರಿಗಳು ಮೃತಪಟ್ಟಿರುವ ಘಟನೆ ತಾಲ್ಲೂಕಿನ ಹಳೇ ಕಲ್ಯಾಡಿ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಸಣ್ಣಪ್ಪ ಎಂಬುವರಿಗೆ ಸೇರಿದ ಮನೆ ಗೋಡೆ ಕುಸಿದಿದೆ. ಸಣ್ಣಪ್ಪ ಆಗಷ್ಟೇ ಮನೆಯಿಂದ ಹೊರಗೆ ಹೋಗಿದ್ದರು. ಪತ್ನಿ ಸಾಮಗ್ರಿ ತರಲು ಅಂಗಡಿಗೆ ತೆರಳಿದ್ದರು. ಈ ವೇಳೆ ಏಕಾಏಕಿ ಗೋಡೆ ಕುಸಿದಿದೆ. ಪಕ್ಕದಲ್ಲೇ ಕಟ್ಟಿದ್ದ ಕುರಿಗಳ ಮೇಲೆ ಗೋಡೆ ಬಿದ್ದಿದ್ದರಿಂದ ಸ್ಥಳದಲ್ಲೇ ಮೃತಪಟ್ಟಿವೆ.

ಗೋಡೆ ಬಿದ್ದ ಜಾಗದಲ್ಲೇ ಸಣ್ಣಪ್ಪ ಅವರ ಪತ್ನಿ ನಿತ್ಯ ಪಾತ್ರೆ ತೊಳೆಯುತ್ತಿದ್ದರು. ಅದೃಷ್ಟವಶಾತ್ ಮನೆಯಲ್ಲಿ ಯಾರೂ ಇಲ್ಲದಾಗ ಅವಘಡ ಸಂಭವಿಸಿದೆಯಾದರೂ ಮೂಕ ಪ್ರಾಣಿಗಳು ಬಲಿಯಾಗಿವೆ. ಕೂಲಿ ಕೆಲಸ ಮಾಡಿಕೊಂಡು ಬದುಕುತ್ತಿರುವ ದಂಪತಿಗೆ ಮನೆ ಗೋಡೆ ಕುಸಿದಿದ್ದು ದಿಕ್ಕು ತೋಚದಂತಾಗಿದೆ. ಸಂಬಂಧಪಟ್ಟ ಅಧಿಕಾರಿಗಳು ಸಂತ್ರಸ್ತರಿಗೆ ಪರಿಹಾರ ಕಲ್ಪಿಸಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.

# ದೊಡ್ಡಮ್ಮ, ಶಾಂತವೀರಮ್ಮ ಬಂಡಿ ಉತ್ಸವ



ಅರಕಲಗೂಡು: ಗ್ರಾಮ ದೇವತೆಯರಾದ ಶ್ರೀ ದೊಡ್ಡಮ್ಮ ದೇವಿ ಮತ್ತು ಶ್ರೀ ಶಾಂತವೀರಮ್ಮ ಬಂಡಿ ಹಬ್ಬದ ಅಂಗವಾಗಿ ಪಟ್ಟಣದ ಕುರುಬರ ಬೀದಿಯಲ್ಲಿ ದೇವತೆಗಳ ಉತ್ಸವ ಮೂರ್ತಿ ಮೆರವಣಿಗೆ ನಡೆಯಿತು.

ಐದು ವರ್ಷಕ್ಕೊಮ್ಮೆ ಆಚರಿಸುವ ಬಂಡಿ ಹಬ್ಬದ ದೇವತೆಗಳ ಉತ್ಸವ ಮೂರ್ತಿಗಳನ್ನು ಭಕ್ತರು ಚಿಲುಮೆ ಮಠದಲ್ಲಿ ವಿಶೇಷ ಪೂಜೆಗಳನ್ನು ಸಲ್ಲಿಸುವ ಮೂಲಕ ಮೆರವಣಿಗೆ ಆರಂಭಿಸಿದರು. ಇಲ್ಲಿಂದ ಅಲಂಕೃತಗೊಂಡ ದೇವತೆಗಳ ಉತ್ಸವವು ಕುರುಬರ ಬೀದಿ ಮೂಲಕ ಸಾಗಿತು. ಈ ಸಂದರ್ಭದಲ್ಲಿ ಗ್ರಾಮದ ಭಕ್ತರು ಅಲಂಕೃತ ಅಡ್ಡೆ ಮೇಲಿನ ದೊಡ್ಡಮ್ಮ ದೇವಿ ಹಾಗೂ ಶಾಂತವೀರಮ್ಮ ದೇವತೆಗಳನ್ನು ಹೆಗಲ ಮೇಲೆ ಹೊತ್ತು ಭಕ್ತಿ ಭಾವದಿಂದ ಮೆರದರೆ ಇತರೆ ಭಕ್ತರು ಉತ್ಸವ ದೇವತೆಗಳಿಗೆ ಪೂಜೆ ಸಲ್ಲಿಸಿ ಭಕ್ತಿ ಭಾವ ಸಮರ್ಪಿಸಿದರು.

ಇದಾದ ಬಳಿಕ ಗ್ರಾಮದೇವತೆ ದೊಡ್ಡಮ್ಮ ದೇವಸ್ಥಾನಕ್ಕೆ ತೆರಳಿ ಪೂಜೆ ವಿಧಾನಗಳನ್ನು ಪೂರೈಸಿದ ನಂತರ ಘಟ ಉತ್ಸವ ಶ್ರದ್ಧಾಭಕ್ತಿಯಿಂದ ನೆರವೇರಿತು. ರಾತ್ರಿ ಕೆಂಡೋತ್ಸವ ಸೇವೆ ಸಲ್ಲಿಸಲಾಯಿತು. ಭಕ್ತರು ಅಲಂಕೃತ ಬಂಡಿಗಳಿಗೆ ಪೂಜೆ ಸಲ್ಲಿಸಿ ಕೆಂಡ ಹಾಯ್ದು ಪೂಜೆ ಪುನಸ್ಕಾರ ಸಲ್ಲಿಸಿ ಭಕ್ತಿ ಮೆರೆದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248